# ಕರ್ನಾಟಕ ವಿಧಾನ ಸಭೆ
## KARNATAKA LEGISLATIVE ASSEMBLY

ಬುಧವಾರ, ೧೮ನೇ ಸೆಪ್ಟೆಂಬರ್ ೧೯೯೧, ಭಾದ್ರಪದ ೨೭, ಶಕ ೧೯೧೩

ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ ೧೦.೧೦ ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು (ಶ್ರೀ ಎಸ್.ಎಂ. ಕೃಷ್ಣರವರು) ಪೀಠವನ್ನು ಅಲಂಕರಿಸಿದರು.

## ಸಂತಾಪ ಸೂಚನೆ

ಅಧ್ಯಕ್ಷರು : ವಿಧಾನ ಸಭೆಯ ಮಾಜಿ ಸದಸ್ಯರಾದ ಶ್ರೀ ಕಾಪು ಸಂಜೀವ ಶೆಟ್ಟಿ ಅವರು ದಿನಾಂಕ ೧೩ನೇ ಸೆಪ್ಟೆಂಬರ್, ೧೯೯೧ ರಂದು ಕುಂದಾಪುರದಲ್ಲಿ ನಿಧನರಾದ ಸುದ್ದಿಯನ್ನು ನೊಂದ ಮನಸ್ಸಿನಿಂದ ಸದನಕ್ಕೆ ತಿಳಿಸುತ್ತಿದ್ದೇನೆ.

ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರೀಯವಾಗಿ ಭಾಗವಹಿಸಿದ್ದ ಶ್ರೀಯುತರು ವೃತ್ತಿಯಲ್ಲಿ ಕೃಷಿಕರಾಗಿದ್ದು, 1978 ರಿಂದ 1983ರವರೆಗೆ ಆರನೆ ವಿಧಾನ ಸಭೆಯ ಸದಸ್ಯರಾಗಿ ಕುಂದಾಪುರ ಕ್ಷೇತ್ರವನ್ನು ಪ್ರತಿನಿಧಿಸಿ ಸೇವೆ ಸಲ್ಲಿಸಿರುತ್ತಾರೆ. ಕಾಳಾವರ ಸಹಕಾರ ಸಂಘದ ಸ್ಥಾಪಕ ಅಧ್ಯಕ್ಷರಾಗಿ, ಡಿ.ಸಿ.ಸಿ ಬ್ಯಾಂಕ್ ನಿರ್ದೇಶಕರಾಗಿ, ಸೌತ್ ಕೆನರಾ ತೋಟಗಾರಿಕಾ ಸಂಘದ ನಿರ್ದೇಶಕರಾಗಿ ಹಾಗೂ ಪ್ರಾಥಮಿಕ ಭೂ ಅಭಿವೃದ್ಧಿ ಬ್ಯಾಂಕಿನ ನಿರ್ದೇಶಕರಾಗಿಯೂ ಸಹ ಸೇವೆ ಸಲ್ಲಿಸಿರುವುದರ ಜೊತೆಗೆ ಶಿಕ್ಷಣ ಹಾಗೂ ಸಾಂಸ್ಕೃತಿಕ ಕ್ಷೇತ್ರದಲ್ಲಿ ಯೂ ಗಣನೀಯ ಸೇವೆ ಸಲ್ಲಿಸಿರುವ ಕೀರ್ತಿ ಶ್ರೀಯುತರದಾಗಿರುತ್ತದೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

## (ಸದಸ್ಯರು ಮೌನ ಆಚರಿಸಿದ ನಂತರ)

ದಿವಂಗತರ ಕುಟುಂಬ ವರ್ಗದವರಿಗೆ ಈ ಸಭೆ ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯವನ್ನು ಕಳುಹಿಸಿಕೊಡಲಾಗುವುದು.

## ವಿತ್ತೀಯ ಕಾರ್ಯಕಲಾಪಗಳು

**1991-92ನೇ ಸಾಲಿನ ಬೇಡಿಕೆಗಳ ಮೇಲಿನ ಚರ್ಚೆ. (ಬೇಡಿಕೆಯ ಸಂಖ್ಯೆ 45, 46, 47, 49, 5, 48, 36, 35) (ಪಿ.ಡಬ್ಯು.ಡಿ ನೀರಾವರಿ, ವಿದ್ಯುಚ್ಛಕ್ತಿ ಮತ್ತತರ ಇಲಾಖೆಗಳ ಬೇಡಿಕೆಗಳು)**

+ ಶ್ರೀ ಯು.ಕೆ. ಶಾಮಣ್ಣ (ಶೃಂಗೇರಿ) : ಸನ್ಮಾನ್ಯ ಅಧ್ಯಕ್ಷರೆ, ಈಗಾಗಲೇ ಕಳೆದ ಒಂದೂವರೆ ದಿವಸದಿಂದ ಈ ಪಿಡಬ್ಯುಡಿ ಇಲಾಖೆ ಮತ್ತು ಸಣ್ಣ ನೀರಾವರಿ, ವಿದ್ಯುತ್ ಖಾತೆ ಬಗ್ಗೆ ಅನೇಕ ಜನ ಮಿತ್ರರು ವಿವರವಾಗಿ ಮಾತನಾಡಿದ್ದಾರೆ.